**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

ಕಾರ್ಯದರ್ಶಿ, ವಾರ್ಡ್ ಸಮಿತಿ /ಸಹಾಯಕ ಇಂಜಿನಿಯರ್‌ರವರ ಕಛೇರಿ, ವೃಷಭಾವತಿನಗರ ವಾರ್ಡ್–102,
3ನೇ ಮುಖ್ಯರಸ್ತೆ, ಬಿ.ಇ.ಎಮ್.ಎಲ್. ಲೇಔಟ್, ಬೆಂಗಳೂರು–79.


**ಸಂಖ್ಯೆ: ವಾ–102/ವಾ.ಸ./ಸಭಾನಡವಳಿ–26/2021–22** **ದಿನಾಂಕ: 06/11/2021**

**–:ಸಭೆಯ ನಡವಳಿಗಳು:–**

ಮಾನ್ಯ ನೋಡಲ್ ಅಧಿಕಾರಿಯವರ ಆದೇಶದಂತೆ, ದಿನಾಂಕ: 06/11/2021 ಶನಿವಾರ ಬೆಳಿಗ್ಗೆ 10.00 ಘಂಟೆಗೆ ವಾರ್ಡ್–102 ವೃಷಭಾವತಿನಗರ ವಾರ್ಡ್ ಮಟ್ಟದ ಸಮಿತಿ ಸಭೆಯನ್ನು ಆಯೋಜಿಸಲಾಯಿತು.

ಶ್ರೀ.ಜಿ.ಪ್ರಕಾಶ್ ಸಮಿತಿಯ ಕಾರ್ಯದರ್ಶಿಗಳು ರವರು ಸಭೆಯನ್ನು ನಡೆಸುತ್ತಾ, ಸಾರ್ವಜನಿಕರ ಕುಂದು ಕೊರತೆಗಳು ಹಾಗೂ ವಾರ್ಡ್ ಅಭಿವೃದ್ಧಿಗೆ ಸಂಬಂದಿಸಿದಂತೆ ಹಾಗೂ ಕೋವಿಡ್–19 ವೈರಸ್‌ನ ಸೋಂಕಿನ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹಾಗೂ ಸಾರ್ವಜನಿಕರ ಹಿತರಕ್ಷಣೆಗಾಗಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಯಲ್ಲಿ ಉಪಸ್ಥಿತರಾಗಿರುವ ಮಾನ್ಯ ನೋಡಲ್ ಅಧಿಕಾರಿಯವರಿಗೆ ಮತ್ತು ಸಭೆಗೆ ಆಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಭೆಗೆ ಸ್ವಾಗತ ಕೋರುತ್ತಾ, ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು.

**ಸಭೆಗೆ ಹಾಜರಿದ್ದವರು:**

| | |
|---|---|
| 1 | ಶ್ರೀ ಕೆ. ವಿಜಯಶೇಖರ,<br>ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್– 102. |
| 2 | ಶ್ರೀ ಜಿ. ಪ್ರಕಾಶ್, ಕಾರ್ಯದರ್ಶಿ ಮತ್ತು ಸಂಚಾಲಕರು, ವಾರ್ಡ್ ಸಮಿತಿ ವಾ–102 ಹಾಗೂ ಸಹಾಯಕ ಅಭಿಯಂತರರು, ವಾರ್ಡ್–102. |
| 3 | ಶ್ರೀ ಜಿ.ಆರ್.ಗೋವಿಂದ ರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್–102. |
| 4 | ಶ್ರೀ ಬಾಬು, ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್–102. |
| 5 | ಶ್ರೀ ಹರೀಶ್ ಎಮ್., ಟ್ಯಾಕ್ಸ್ ಇನ್ಸ್‌ಪೆಕ್ಟರ್, ವಾರ್ಡ್–102. |
| 6 | ಶ್ರೀ ಶೇಖರ್ ನಾಯಕ್, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 7 | ಶ್ರೀ ಮಹಾಲಿಂಗಯ್ಯ, ಪಿ.ಎಸ್.ಐ., ಬಸವೇಶ್ವರನಗರ ಪೊಲೀಸ್ ಠಾಣೆ. |
| 8 | ಶ್ರೀ ಸದಾನಂದ, ಎ.ಎಸ್. ಪಿ.ಎಸ್.ಐ, ಕಾಮಾಕ್ಷಿಪಾಳ್ಯ ಪೊಲೀಸ್ ಠಾಣೆ. |
| 9 | ಮಹದೇವಯ್ಯ, ಸ್ಯಾನಿಟರಿ ದಫೇದಾರ, ವಾರ್ಡ್–102. |
| 10 | ಶ್ರೀಮತಿ ಪ್ರೇಮ, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |
| 11 | ಶ್ರೀ ಹೇಮಂತ್ ಕುಮಾರ್, ವಾರ್ಡ್ ಸಮಿತಿ ವಾರ್ಡ್–102. |
| 12 | ಶ್ರೀ ಗೌರಮ್ಮ, ವಾರ್ಡ್ ಸಮಿತಿ ವಾರ್ಡ್–102. |
| 13 | ಶ್ರೀ ರಂಗನಾಥ್ ಸಿ., ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |
| 14 | ಶ್ರೀ ಚಂದ್ರಪ್ಪ, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |
| 15 | ಶ್ರೀ ದೇವರಾಜು, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102. |

ಪು.ತಿ.ನೋ.

**ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:**

1) **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-**

- ಮಾನ್ಯ ನೋಡಲ್ ಅಧಿಕಾರಿಯವರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಮಾತನಾಡುತ್ತಾ, ವಾರ್ಡ್-102 ವೃಷಭಾವತಿನಗರದಲ್ಲಿ ಕೋವಿಡ್-19ಗೆ ಸಂಭಂಧಿಸಿದಂತೆ ಮಾಹಿತಿಗಳ ವಿವರಣೆ ನೀಡುವಂತೆ ಸಭೆಯಲ್ಲಿ ತಿಳಿಸಿದರು.
- ಶ್ರೀ ಗೋವಿಂದರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿನಿತ್ಯ ಎಂದಿನಂತೆ ಕೋವಿಡ್ ಪರೀಕ್ಷೆಗಳನ್ನು ಕೈಗೊಳ್ಳುತ್ತಿದ್ದು, ಕಳೆದ 15 ದಿನಗಳಿಂದ 05 ಸಂಖ್ಯೆ ಆಕ್ಟಿವ್ ಕೇಸ್‌ಗಳು ಕಂಡುಬಂದಿದ್ದು, 05 ಸಂಖ್ಯೆಯ ಸೋಂಕಿತರನ್ನು ಹೋಮ್ ಐಸೋಲೇಷನ್ ಮಾಡಲಾಗಿರುತ್ತದೆ, ಹಾಗೂ ಯಾವುದೇ ಡೆತ್ ಕೇಸ್‌ಗಳು ಕಂಡುಬಂದಿರುವುದಿಲ್ಲ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿರುವ ಮಾರುತಿ ಶಾಲೆ ಮತ್ತು ನಗರ ಪ್ರಾಥಮಿಕ ಆರೋಗ್ಯ ಕೇಂದ್ರ (ಕಾಮಾಕ್ಷೀಪಾಳ್ಯ) ದಲ್ಲಿ ವ್ಯಾಕ್ಸಿನೇಷನ್ ನೀಡುವ ಕಾರ್ಯಕ್ರಮವನ್ನು ಕೈಗೊಳ್ಳಲಾಗುತ್ತಿದೆ. ಹಾಗೂ ಕೋವಿಡ್-19 ಸಾಂಕ್ರಾಮಿಕ ರೋಗದ ಸೋಂಕಿನಿಂದಾಗಿ ಮೃತಪಟ್ಟ ಕುಟುಂಬದವರಿಗೆ ಸರ್ಕಾರದ ವತಿಯಿಂದ ಪರಿಹಾರ (ಬಿಪಿಎಲ್ ಪಡಿತರ ಚೀಟಿ ಹೊಂದಿದವರಿಗೆ ರಾಜ್ಯ ಸರ್ಕಾರದಿಂದ ರೂ. 1,00,000/- ಮತ್ತು ಕೇಂದ್ರ ಸರ್ಕಾರದಿಂದ ರೂ. 50,000/- ಗಳು ಹಾಗೂ ಎಪಿಎಲ್ ಪಡಿತರ ಚೀಟಿ ಹೊಂದಿದವರಿಗೆ/ ಯಾವುದೇ ಪಡಿತರ ಇಲ್ಲದಿವರುವವರಿಗೆ ರೂ. 50,000/- ಗಳು) ನೀಡುವ ಕುರಿತು ಸಭೆಯಲ್ಲಿ ವಿವರಣೆಯನ್ನು ನೀಡಲಾಯಿತು ಹಾಗೂ ಇದಕ್ಕೆ ಸಂಬಂಧಿಸಿದಂತೆ ಅರ್ಜಿಗಳ ಮಾಹಿತಿಯನ್ನು ವಾರ್ಡ್ ಕಛೇರಿಯ ಕಂದಾಯ ಶಾಖೆ/ಆರೋಗ್ಯ ಶಾಖೆಯಲ್ಲಿ ಪಡೆಯಬಹುದಾಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದರು.

2) **ಅಭಿಯಂತರರ ವಿಭಾಗದ ಬಗ್ಗೆ:-**

- ಶ್ರೀ ಚಂದ್ರಪ್ಪ ಸದಸ್ಯರು ರವರು ಮಾತನಾಡುತ್ತಾ, ಮಾಗಡಿ ಮುಖ್ಯರಸ್ತೆಯಿಂದ ಆಂಜನೇಯ ದೇವಸ್ಥಾನಕ್ಕೆ ಕೂಡುವ ರಸ್ತೆಯಲ್ಲಿ ಕಲ್ವರ್ಟ್ ಎತ್ತರವಾಗಿದ್ದು, ಅದನ್ನು ಸರಿಪಡಿಸುವಂತೆ ಸಭೆಯಲ್ಲಿ ಕೋರಿದರು.
- ಶ್ರೀ ಹೇಮಂತ್ ಸದಸ್ಯರು, ರವರು ಮಾತನಾಡುತ್ತಾ, ಎನ್.ಜಿ.ಓ.'ಎಸ್ ಕಾಲೋನಿಯ 4ನೇ ಮುಖ್ಯರಸ್ತೆ ಮತ್ತು 4ನೇ ಡಿ ಅಡ್ಡರಸ್ತೆ ಹಾಗೂ ಶನಿಮಹಾತ್ಮ ದೇವಸ್ಥಾನದ ರಸ್ತೆಗಳಲ್ಲಿ ರಸ್ತೆಗುಂಡಿಗಳು ಬಿದ್ದಿದ್ದು ಶೀಘ್ರವಾಗಿ ಸರಿಪಡಿಸಿಕೊಡುವಂತೆ ಸಭೆಯಲ್ಲಿ ಕೋರಿದರು.
- ಸಹಾಯಕ ಅಭಿಯಂತರರು ವಾರ್ಡ್-102 ರವರು ಮಾತನಾಡುತ್ತಾ, ಅಕಾಲಿಕ ಮಳೆ ಪೂರ್ಣಗೊಂಡ ನಂತರ ರಸ್ತೆಗುಂಡಿಗಳನ್ನು ಸರಿಪಡಿಸಲಾಗುವುದು ಹಾಗೂ ಮಾಗಡಿ ಮುಖ್ಯರಸ್ತೆಯಿಂದ ಆಂಜನೇಯ ದೇವಸ್ಥಾನಕ್ಕೆ ಕೂಡುವ ರಸ್ತೆಯಲ್ಲಿ ಕಲ್ವರ್ಟ್ ಎತ್ತರವಾಗಿದ್ದು, ಇದನ್ನು ಸೆಂಟ್ರಲ್ ಪ್ರಾಜೆಕ್ಟ್‌ರವರ ವತಿಯಿಂದ ದುರಸ್ಥಿಗೊಳಿಸಲು ಸೂಕ್ತ ಕ್ರಮವಹಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

3) **ಘನತ್ಯಾಜ್ಯ ನಿರ್ವಹಣೆ ವಿಭಾಗದ ಬಗ್ಗೆ:-**

- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಕಸದ ಸಮಸ್ಯೆಗಳ ಬಗ್ಗೆ ಬ್ಲಾಕ್‌ಸ್ಪಾಟ್‌ಗಳಲ್ಲಿ ಹಾಗೂ ಪ್ರತಿನಿತ್ಯ ಹಸಿಕಸ ಹಾಗೂ ಒಣ ಕಸವನ್ನು ತೆರವುಗೊಳಿಸಲು ಕೈಗೊಂಡ ಕ್ರಮದ ಬಗ್ಗೆ ವಿವರಿಸುವಂತೆ ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು.
- ಶ್ರೀ ಬಾಬು, ಕಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡುತ್ತಾ, ಪ್ರತಿನಿತ್ಯ ವಾರ್ಡ್ ವ್ಯಾಪ್ತಿಯ ಬ್ಲಾಕ್‌ಸ್ಪಾಟ್‌ಗಳಲ್ಲಿ ಕಂಡುಬರುವ ಡೆಬ್ರಿಸ್‌ಗಳನ್ನು ತೆರವುಗೊಳಿಸುವುದು ಹಾಗೂ ಪ್ರತಿನಿತ್ಯ ಆಟೋ/ ಟಿಪ್ಪರ್‌ಗಳ ಮೂಲಕ ತ್ಯಾಜ್ಯಗಳನ್ನು ಸ್ವೀಕರಿಸುವುದು ಹಾಗೂ ತೋಟದ ರಸ್ತೆ ಸೇರಿದಂತೆ ಎಲ್ಲಾ ಬ್ಲಾಕ್‌ಸ್ಪಾಟ್‌ಗಳಲ್ಲಿ ಪ್ರತಿನಿತ್ಯ ಬೆಳಿಗ್ಗೆ-6.30 ರಿಂದ ಮಧ್ಯಾಹ್ನ 2.30 ರವರಗೆ ಮತ್ತು ರಾತ್ರಿ 8.00 ರಿಂದ 12.00 ಗಂಟೆಯ ವರೆಗೆ ಮಾರ್ಷಲ್‌ಗಳು ಗಸ್ತು ತಿರುಗುವಂತೆ ಕ್ರಮವಹಿಸುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಪು.ತಿ.ನೋ.

4) **ಕಂದಾಯ ವಿಭಾಗದ ಬಗ್ಗೆ:-**

- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಮಾನ್ಯ ಮುಖ್ಯ ಆಯುಕ್ತರು ಸೂಚಿಸಿರುವಂತೆ ತೆರಿಗೆ ವಸೂಲಾತಿಗಾಗಿ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಸಭೆಯಲ್ಲಿ ಹೇಳುವಂತೆ ತಿಳಿಸಿದರು.
- ಸಭೆಯಲ್ಲಿ ಹಾಜರಿದ್ದ ಶ್ರೀ ಹರೀಶ್, ಟ್ಯಾಕ್ಸ್ ಇನ್ಸ್‌ಪೆಕ್ಟರ್ ವಾರ್ಡ್-102 ರವರು ಮಾತನಾಡುತ್ತಾ, ಮಾನ್ಯ ಮುಖ್ಯ ಆಯುಕ್ತರ ಸೂಚನೆಯಂತೆ ತೆರಿಗೆ ವಸೂಲಾತಿ ಮಾಡಲಾಗುತ್ತಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ಸರಿಯಾದ ರೀತಿಯಲ್ಲಿ ತೆರಿಗೆ ಪಾವತಿಯಾಗುತ್ತಿದ್ದು, ತೆರಿಗೆ ಮಾಡದ ಕೆಲವು ಸಾರ್ವಜನಿಕರಿಗೆ ಇದುವರೆವಿಗೂ ಸುಮಾರು 350 ನೋಟೀಸ್‌ಗಳನ್ನು ಜಾರಿ ಮಾಡಲಾಗಿರುವುದಾಗಿ ಸಭೆಯಲ್ಲಿ ತಿಳಿಸಿದರು.

5) **ಬೆಸ್ಕಾಂ ವಿಭಾಗದ ಬಗ್ಗೆ:-**

- ಶ್ರೀಮತಿ ಪ್ರೇಮ ವಾರ್ಡ್ ಸಮಿತಿ ಸದಸ್ಯರು ಮಾತನಾಡುತ್ತಾ, ಸಣ್ಣಕ್ಕಿ ಬಯಲು ಶನಿಮಹಾತ್ಮ ದೇವಸ್ಥಾನದ 1ನೇ ಅಡ್ಡರಸ್ತೆ 1ನೇ ಮುಖ್ಯರಸ್ತೆಯಲ್ಲಿ ಹೊಸದಾಗಿ ಬೀದಿ ದೀಪದ ಕಂಬವನ್ನು ಅಳವಡಿಸುವಂತೆ ಹಾಗೂ 4ನೇ ಸಿ ಅಡ್ಡರಸ್ತೆ ವಿನಾಯಕ ಬಡಾವಣೆಯಲ್ಲಿ ವಿದ್ಯುತ್ ಕಂಬವನ್ನು ಸ್ಥಳಾಂತರಿಸುವಂತೆ ಈಗಾಗಲೇ ಹಿಂದಿನ ಸಭೆಗಳಲ್ಲಿ ತಿಳಿಸಲಾಗಿರುತ್ತದೆ ಆದರೆ ಈವರೆವಿಗೂ ಯಾವುದೇ ಕ್ರಮ ಕೈಗೊಂಡಿರುವುದಿಲ್ಲವೆಂದು ಸಭೆಯಲ್ಲಿ ತಿಳಿಸಿದರು.
- ಕಾರ್ಯದರ್ಶಿಗಳು ಮಾತನಾಡುತ್ತಾ, ಸದರಿ ವಿಷಯದ ಬಗ್ಗೆ ಬೆಸ್ಕಾಂ ವಿಭಾಗದವರಿಗೆ ಕೂಡಲೇ ಕ್ರಮ ಕೈಗೊಳ್ಳುವಂತೆ ತಿಳಿಸುವುದಾಗಿ ಸಭೆಯಲ್ಲಿ ತಿಳಿಸಿದರು.

6) **ಬಿ.ಡಬ್ಲ್ಯೂ.ಎಸ್.ಎಸ್.ಬಿ. ವಿಭಾಗದ ಬಗ್ಗೆ:-**

- ಶ್ರೀ ದೇವರಾಜು, ಸದಸ್ಯರು ರವರು ಮಾತನಾಡುತ್ತಾ, ಎನ್.ಜಿ.ಓ.'ಎಸ್ ಕಾಲೋನಿಯಲ್ಲಿ ಕುಡಿಯುವ ನೀರನ್ನು ಬಿಡುವ ಸಮಯವನ್ನು ಹೆಚ್ಚಿಸಬೇಕಾಗಿ ಸಹಾಯಕ ಅಭಿಯಂತರರಿಗೆ ತಿಳಿಸುವಂತೆ ಹಾಗೂ ವಾಲ್ವ್‌ಗಳನ್ನು ದುರಸ್ಥಿಗೊಳಿಸುವಂತೆ ಸಭೆಯಲ್ಲಿ ಕೋರಿದರು.
- ಎಲ್ಲಾ ಸದಸ್ಯರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಬೋರ್‌ವೆಲ್ ನೀರಿನ ನಿಯಂತ್ರಣಕ್ಕಾಗಿ ಅಳವಡಿಸಲಾದ ಪ್ಯಾನೆಲ್ ಬೋರ್ಡ್, ಎಲೆಕ್ಟ್ರಿಕಲ್ ಕೇಬಲ್, ಸ್ವಿಚ್ ಬೋರ್ಡ್‌ಗಳು ಹಾಗೂ ಇತ್ಯಾದಿಗಳು ಹಾಳಾಗಿದ್ದು, ಶೀಘ್ರವಾಗಿ ದುರಸ್ಥಿ ಮಾಡಿಸಿಕೊಡುವಂತೆ ಸಭೆಯಲ್ಲಿ ಕೋರಿದರು.
- ಶ್ರೀ ಹೇಮಂತ್ ಸದಸ್ಯರು ರವರು ಮಾತನಾಡುತ್ತಾ, ಎನ್.ಜಿ.ಓ.'ಸ್ ಕಾಲೋನಿಯ 4ನೇ ಮುಖ್ಯರಸ್ತೆ, 4ನೇ ಡಿ ಅಡ್ಡರಸ್ತೆಯಲ್ಲಿ ಎರಡು ಮ್ಯಾನ್‌ಹೋಲ್‌ಗಳನ್ನು ರಸ್ತೆಯ ಮಟ್ಟಕ್ಕೆ ಎತ್ತರಿಸುವಂತೆ ಸಭೆಯಲ್ಲಿ ಕೋರಿದರು.
- ಮಾನ್ಯ ನೋಡೆಲ್ ಅಧಿಕಾರಿ ರವರು ಮಾತನಾಡುತ್ತಾ, ಸಹಾಯಕ ಅಭಿಯಂತರರು, ಕೊಳವೆಬಾವಿ ನಿರ್ವಹಣಾ ವಿಭಾಗ, ಬಿ.ಡಬ್ಲ್ಯೂ.ಎಸ್.ಎಸ್.ಬಿ. ರವರು ಸದರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ಶೀಘ್ರವಾಗಿ ಸೂಕ್ತ ಕ್ರಮವಹಿಸುವುದು ಹಾಗೂ ಮುಂದಿನ ಸಭೆಗೆ ತಪ್ಪದೇ ಹಾಜರಾಗಿ ತೆಗೆದುಕೊಂಡಿರುವ ಕ್ರಮದ ಬಗ್ಗೆ ಸಭೆಯಲ್ಲಿ ವಿವರಿಸುವಂತೆ ತಿಳಿಸಿದರು.

7) **ಪೊಲೀಸ್ ವಿಭಾಗದ ಬಗ್ಗೆ:-**

- ಶ್ರೀ ಹೇಮಂತ್ ಸದಸ್ಯರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯ ಮುನೇಶ್ವರ ದೇವಸ್ಥಾನದ ಹತ್ತಿರ ಮತ್ತು ಎನ್.ಜಿ.ಓ.'ಎಸ್ ಕಾಲೋನಿಯ ಸರ್ಕಾರಿ ಶಾಲೆ ಹತ್ತಿರ ಹಾಗೂ ಗಂಗಣ್ಣ ಬಡಾವಣೆಯ ಕೆಂಪೇಗೌಡ ಶಾಲೆ ಹತ್ತಿರ ಹಾಗೂ ಇತರೆ ಸೂಕ್ಷ್ಮ ಪ್ರದೇಶಗಳಲ್ಲಿ ಮದ್ಯ ವ್ಯಸನಿಗಳ ಹಾಗೂ ಮಾದಕ ವ್ಯಸನಿಗಳ ಹಾವಳಿ ಹೆಚ್ಚಾಗಿದ್ದು, ಪೊಲೀಸ್ ಕ್ರೈಂ ಬ್ರಾಂಚ್‌ರವರಿಂದ ಶಾಲಾ ಮಕ್ಕಳಿಗೆ ಸುರಕ್ಷತೆ ಒದಗಿಸಲು ಮಫ್ತಿಯಲ್ಲಿ ಬೀಟ್ ಹಾಕಲು ಸೂಕ್ತ ಕ್ರಮವಹಿಸಬೇಕಾಗಿ ಸಭೆಯಲ್ಲಿ ಕೋರಿದರು.
- ಸದರಿ ವಿಷಯವಾಗಿ ಬಸವೇಶ್ವರನಗರ ಹಾಗೂ ಕಾಮಾಕ್ಷಿಪಾಳ್ಯ ಆರಕ್ಷಕ ಠಾಣೆಯಿಂದ ಸಭೆಯಲ್ಲಿ ಹಾಜರಿದ್ದ ಆರಕ್ಷಕ ಸಿಬ್ಬಂದಿ ವರ್ಗದವರು ಮಾತನಾಡುತ್ತಾ, ಸದರಿ ದೂರಿನ ಬಗ್ಗೆ ಮೇಲಾಧಿಕಾರಿಗಳ ಗಮನಕ್ಕೆ ತಂದು ಶೀಘ್ರವಾಗಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

ಪು.ತಿ.ನೋ.

ವಾರ್ಡ್ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಪಟ್ಟಿ ಮಾಡಿಕೊಂಡು ಸದರಿ ದೂರುಗಳನ್ನು ಸರಿಪಡಿಸಿರುವ ಬಗ್ಗೆ ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ದೃಢೀಕೃತ ಮಾಹಿತಿಗಳನ್ನು ತಪ್ಪದೇ **ವಾರ್ಡ್ ಕಮಿಟಿ ವಾರ್ಡ್-102 ವಾಟ್ಸ್ ಆಪ್ ಗ್ರೂಪ್** ನಲ್ಲಿ ಮತ್ತು ಪ್ರತೀ ವಾರ್ಡ್ ಸಮಿತಿ ಸಭೆಯಲ್ಲಿ ವರದಿ ಮಾಡಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯ ಗೊಳಿಸಲಾಯಿತು. ಸಭೆಯ ಕೊನೆಯಲ್ಲಿ ಸಮಿತಿ ಕಾರ್ಯದರ್ಶಿ ರವರು ಸಮಿತಿ ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್ ಸಂಖ್ಯೆ-102

ನೋಡಲ್ ಅಧಿಕಾರಿಗಳು
ವಾರ್ಡ್ ಸಮಿತಿ, ವಾರ್ಡ್-102

ಪ್ರತಿಯನ್ನು

1. ಮಾನ್ಯ ವಲಯ ವಿಶೇಷ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ತಾಂತ್ರಿಕ ಸಹಾಯಕರಿಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ವೈದ್ಯಕೀಯ ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

W-102 ವೃಷಭಾವತಿನಗರ

ದಿನಾಂಕ: 06/11/2021 ಸಮಯ= 10.00ಘಂಟೆಗೆ

ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು ಸಭೆಯಲ್ಲಿ ಭಾಗವಹಿಸಿದ ಅಧಿಕಾರಿಗಳು ಹಾಗು RWA's ಸದಸ್ಯರುಗಳ ಪಟ್ಟಿ.

| ಕ್ರಮ ಸಂಖ್ಯೆ | ಹೆಸರು | ಪದನಾಮ | ಮೊಬೈಲ್ ಸಂಖ್ಯೆ | ಸಹಿ |
|---|---|---|---|---|
| 1) | ಕೆ. ವಿಜಯ ಕುಮಾರ್ | ನೋಡಲ್ ಅಧಿಕಾರಿ | 9448670084 | [signature] 6/11/2021 |
| 2) | ಪ್ರಕಾಶ್. ಜಿ. | W-102ರ ಕಂದಾಯ ವಿಭಾಗ | 9845236847 | [signature] 6/11/2021 |
| 3) | ರಂಗನಾಥ್. H | AEE, ಮ.ಗಾಲ್ವೆ. | 9480685316 | |
| 4) | ಗೋವಿಂದರಾಜುಲು | SHI | 9845512187 | G.R. Govind |
| 5) | ಬಾಬು | JHI | 9632549664 | S. Babu |
| 6) | ರಾಜೇಶ್. M | T.I | 7411692135 | |
| 7) | (ಸಿದ್ದರಾಜು) ಹೇಮಂತ್ J.E | AE, Bescom | 9449870177 | H. Keerthi [signature] 06/11/21 |
| 8) | ಶೇಖರ್‌ನಾಯಕ್ | AE, BWSSB | 984544074 | |
| 9) | ಲೋಕೇಶ್ | Veternary | 9480683056 | |
| 10) | ಪರಶು. ಕೆ. ಶ್ರೀನ. n | ward marshal | 7975160318 | S. [signature] ಸಂಗಾಪ್ಪ |
| 11) | ಹೇಮಂತ್ ಕುಮಾರ್ | RWA's | 9448362208 | [signature] |
| 12) | ಪ್ರೇಮ | —‖— | 9632728915 | Prema |

| | | | | |
|---|---|---|---|---|
| 13) | ಚಿಕ್ಕಗಂಗಮ್ಮ | RWAS | 9902399918 | |
| 14) | ಗೌರಮ್ಮ | —ıı— | 9740249333 ~~8353779344~~ | |
| 15) | ರಾಜ್‌ಕುಮಾರ್ | —ıı— | 8353779344 | |
| 16) | ಚಂದ್ರಪ್ಪ | —ıı— | 9845763281 | Chandra (signature) |
| 17) | ದೇವರಾಜು | —ıı— | 9632584986 | ದೇವರಾಜ್ (signature) |
| 18) | ~~[illegible]~~ ರಂಗನಾಥ್ C | —ıı— | 9341199998 | (signature) |
| 19) | S. [illegible] | JE. BWSSB. | 9742231059 | (signature) |
| 20) | Raghavendra K. | B.W.S.S.B | 9986449988 | (signature) |
| 21) | ಶೇಖರಪ್ಪ. | ASI Basaveshwara Nagar PS | 9962528298. | (signature) |
| 22) | [illegible] | —ıı/—ıı/ | 9916515775 | (signature) |
| 23 | Shekhar | BWSSB. AE | 9845444074 | (signature) |
| 24 | ಸದಾನಂದ, | K.M. palya PS | 9448017662 | Sadanand ASI |